## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಅರಸಪ್ಪ ಮತ್ತು ಶ್ರೀ ಎಂ.ಮಹಾದೇವಪ್ಪ, ಹಿಂದಿನ ಸದಸ್ಯರು, ಮರಟಿಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(vi) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮೈಸೂರು ಜಿಲ್ಲೆ ಇವರ ಪತ್ರ ಸಂಖ್ಯೆ:ಡಿಇವಿ3/73/2017-18, ದಿನಾಂಕ:28.11.2017.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 1135 ಗ್ರಾಪಂಅ 2018, ದಿನಾಂಕ:02.02.2019.
3. ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 203 ಗ್ರಾಪಂಅ 2019, ದಿನಾಂಕ:19.02.2019.
4. ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರ ಪತ್ರ ಸಂಖ್ಯೆ:ಚುನಾವಣೆ ಸಿಆರ್9/2018-19, ದಿನಾಂಕ:16.04.2020.
5. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 400 ಗ್ರಾಪಂಅ 2020, ದಿನಾಂಕ:16.05.2020.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಮೈಸೂರು, ಇವರ ಪತ್ರ ಸಂಖ್ಯೆ: ಕಾನಿಅ/ತಾಪಂಮೈ/ಪ್ರ.ಸ./181715/2020-21, ದಿನಾಂಕ:02.06.2020.
7. ಸರ್ಕಾರದ ವಿಚಾರಣಾ ನೋಟೀಸು ಸಂಖ್ಯೆ: ಗ್ರಾಅಪ 400 ಗ್ರಾಪಂಅ 2020, ದಿನಾಂಕ:27.01.2021 ಮತ್ತು 18.02.2021.

***

ಶ್ರೀ ಅರಸಪ್ಪ (ಇನ್ನು ಮುಂದೆ ಎದುರುದಾರರ-1 ಎಂದು ಕರೆಯಲ್ಪಡುತ್ತಾರೆ) ಮತ್ತು ಶ್ರೀ ಎಂ. ಮಹಾದೇವಪ್ಪ, ಸದಸ್ಯರು, (ಇನ್ನು ಮುಂದೆ ಎದುರುದಾರರ-2 ಎಂದು ಕರೆಯಲ್ಪಡುತ್ತಾರೆ) ಮರಟಿಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರು ತಮ್ಮ ಅಧಿಕಾರಾವಧಿಯಲ್ಲಿ ಈ ಕೆಳಕಂಡ ಆರೋಪಗಳನ್ನು ಎಸಗಿರುವುದಾಗಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ ರವರು ಮೇಲೆ ಓದಲಾದ ಕ್ರಮಾಂಕ (1) ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

**ದೋಷಾರೋಪಣೆ:-**

ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಮರಟಿಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ, ಪಂಚಾಯಿತಿಯ ಸದಸ್ಯರುಗಳಾದ ಶ್ರೀ ಅರಸಪ್ಪ ಇವರು ದಿನಾಂಕ:03.08.2015 ರಿಂದ 28.11.2017 ರವರೆಗೆ ನಡೆದ ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆಗೆ ಹಾಗೂ ಶ್ರೀ ಮಹಾದೇವಪ್ಪ ಇವರು ದಿನಾಂಕ:17.06.2016 ರಿಂದ 28.11.2017 ರವರೆಗೆ ನಡೆದ ಗ್ರಾಮ ಪಂಚಾಯಿತಿ ಸಾಮಾನ್ಯ ಸಭೆಗೆ ನಿರಂತರವಾಗಿ ಗೈರು ಹಾಜರಾಗಿರುವುದು.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ-1993 ರ 43(ಎ), 48(4) ಮತ್ತು 48(5) ರಡಿ ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರುಗಳು ಹಾಗೂ ಸದಸ್ಯರುಗಳ ಮೇಲಿನ ಆರೋಪಗಳಿಗೆ ವಿಚಾರಣೆ ನಡೆಸಲು ಮೇಲೆ ಓದಲಾದ ಕ್ರಮಾಂಕ (2)ರಲ್ಲಿ ಪ್ರಾದೇಶಿಕ ಆಯುಕ್ತರುಗಳಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದ್ದು, ಅದರಂತೆ ಸದರಿ ಪ್ರಕರಣದ ವಿಚಾರಣೆ ನಡೆಸಿ, ಸರ್ಕಾರಕ್ಕೆ ವರದಿ ಸಲ್ಲಿಸಲು ಮೇಲೆ ಓದಲಾದ ಕ್ರಮಾಂಕ (3) ರ ಪತ್ರದಲ್ಲಿ ಪ್ರಕರಣವನ್ನು ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರಿಗೆ ವಹಿಸಲಾಗಿತ್ತು.

ಅದರಂತೆ, ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರು ಈ ಪ್ರಕರಣದ ವಿಚಾರಣೆ ನಡೆಸಿ, ಎದುರುದಾರರಾದ ಶ್ರೀ ಅರಸಪ್ಪ, ಇವರು ದಿನಾಂಕ:03.08.2015 ರಿಂದ ಹಾಗೂ ಮತ್ತು ಶ್ರೀ ಎಂ.ಮಹಾದೇವಪ್ಪ, ಹಿಂದಿನ ಸದಸ್ಯರು, ಮರಟಿಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರು ದಿನಾಂಕ:17.06.2016 ರಿಂದ 16.04.2020 ರವರೆಗೆ ನಡೆದ ಗ್ರಾಮ ಪಂಚಾಯಿತಿಯ ಸಾಮಾನ್ಯ ಸಭೆಗಳಿಗೆ ನಿರಂತರವಾಗಿ ಗೈರು ಹಾಜರಾಗಿರುವುದು ಕಂಡು ಬಂದಿರುವುದರಿಂದ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ)(1)(iii) ಹಾಗೂ 13(1)(ಸಿ) ರನ್ವಯ ಕ್ರಮ ಜರುಗಿಸಬಹುದಾಗಿ, ಅಭಿಪ್ರಾಯಪಟ್ಟು ಮೇಲೆ ಓದಲಾದ ಕ್ರಮಾಂಕ (4)ರಲ್ಲಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತಾರೆ.

ಪ್ರಾದೇಶಿಕ ಆಯುಕ್ತರ ಅಭಿಪ್ರಾಯದನ್ವಯ ಕ್ರಮವಹಿಸುವ ಪೂರ್ವದಲ್ಲಿ ಎದುರುದಾರರಾದ ಶ್ರೀ ಅರಸಪ್ಪ ಮತ್ತು ಶ್ರೀ ಎಂ.ಮಹಾದೇವಪ್ಪ, ಹಿಂದಿನ ಸದಸ್ಯರು, ಇವರಿಗೆ ಮೇಲೆ ಓದಲಾದ ಕ್ರಮಾಂಕ (5)ರಲ್ಲಿ ಎರಡನೇ ಕಾರಣ ಕೇಳುವ ನೋಟೀಸ್ ಜಾರಿ ಮಾಡಲಾಗಿದ್ದು, ಸದರಿ ನೋಟೀಸ್ಸನ್ನು ಎದುರುದಾರರಿಗೆ ಜಾರಿಗೊಳಿಸಿರುವ ಬಗ್ಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಮೈಸೂರು, ಇವರು ಮೇಲೆ ಓದಲಾದ ಕ್ರಮಾಂಕ (6) ರಲ್ಲಿ ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತಾರೆ. ಆದರೆ ಎದುರುದಾರರು ಸರ್ಕಾರಕ್ಕೆ ಲಿಖಿತ ಸಮಜಾಯಿಷಿಯನ್ನು ಸಲ್ಲಿಸಿರುವುದಿಲ್ಲ. ಆದಾಗ್ಯೂ ಎದುರುದಾರರಿಗೆ ತಮ್ಮ ಅಹವಾಲು ಸಲ್ಲಿಸಲು ಮೇಲೆ ಓದಲಾದ (7) ರಲ್ಲಿ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ನೋಟೀಸ್ಸನ್ನು ಜಾರಿ ಮಾಡಲಾಗಿರುತ್ತದೆ. ಮುಂದುವರೆದು, ಪ್ರಕರಣವನ್ನು ದಿನಾಂಕ:15.03.2021 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ಯವರ ಅರೆನ್ಯಾಯಿಕ ನ್ಯಾಯಾಲಯದಲ್ಲಿ ವಿಚಾರಣೆಗೆ ಒಳಪಡಿಸಲಾಗಿದೆ. ಸದರಿ ವಿಚಾರಣೆಯಲ್ಲಿ ಕೂಡ ಎದುರುದಾರರು ಗೈರು ಹಾಜರಾಗಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ ಇವರು ಸಲ್ಲಿಸಿರುವ ದಾಖಲೆಗಳು, ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ಇವರ ವರದಿಯನ್ನು ಪರಿಶೀಲಿಸಲಾಗಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಅಧಿನಿಯಮ ಪ್ರಕರಣ 43(ಎ)(1)(iii) ಹಾಗೂ 13(1)(ಸಿ) ರಡಿ ಸದರಿ ಪ್ರಕರಣವನ್ನು ಪರಿಶೀಲಿಸಲಾಗಿ, ಶ್ರೀ ಅರಸಪ್ಪ ಮತ್ತು ಶ್ರೀ ಎಂ.ಮಹಾದೇವಪ್ಪ, ಹಿಂದಿನ ಸದಸ್ಯರು, ಮರಟಿಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧದ ಆರೋಪಗಳು ಸಾಬೀತಾಗಿದ್ದು, ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ

ಸ್ವರಾಜ್ ಮತ್ತು ಪಂಚಾಯತ್ ರಾಜ್(ತಿದ್ದುಪಡಿ) ಅಧಿನಿಯಮ 2020 ರ ಪ್ರಕರಣ 43(ಎ)(vi) ರಡಿ ಮೈಸೂರು ಜಿಲ್ಲೆ, ಮೈಸೂರು ತಾಲ್ಲೂಕು, ಮರಟಿಕ್ಯಾತನಹಳ್ಳಿ ಗ್ರಾಮ ಪಂಚಾಯಿತಿಯ ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಲು ನಿರ್ಧರಿಸಿ, ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ400 ಗ್ರಾಪಂಅ2020, ಬೆಂಗಳೂರು, ದಿನಾಂಕ:22.06.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಅರಸಪ್ಪ ಹಿಂದಿನ ಸದಸ್ಯರು, ಮರಟಿಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಹಾಗೂ ಶ್ರೀ ಎಂ.ಮಹಾದೇವಪ್ಪ, ಹಿಂದಿನ ಸದಸ್ಯರು, ಮರಟಿಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗಿರುವುದರಿಂದ ಕರ್ನಾಟಕಗ್ರಾಮ ಸ್ವರಾಜ್ ಮತ್ತು ಪಂಚಾಯತ್‌ರಾಜ್(ತಿದ್ದುಪಡಿ) ಅಧಿನಿಯಮ1993ರ ಪ್ರಕರಣ 43(ಎ)(vi) ರಡಿ ಹಾಗೂ ಸದರಿ ಅಧಿನಿಯಮದ 12(ಎಲ್) ರನ್ವಯ ಸದರಿಯವರುಗಳನ್ನು ಆರು ವರ್ಷಗಳ ಕಾಲ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

B. Naveenkumar 22/06/21
**(ನವೀನ್‌ಕುಮಾರ್ ಬಿ.)**
ಸರ್ಕಾರದಅಧೀನ ಕಾರ್ಯದರ್ಶಿ(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್‌ಇಲಾಖೆ.(ಜಿ.ಪಂ)

**ಗೆ:**

1) ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು.
2) ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿರಸ್ತೆ, ಬೆಂಗಳೂರು.–09
3) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ.
4) ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ ಮೈಸೂರು ಮೈಸೂರು ಜಿಲ್ಲೆ.
5) ಶ್ರೀ ಅರಸಪ್ಪ ಹಿಂದಿನ ಸದಸ್ಯರು, ಮರಟಿಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ.
6) ಶ್ರೀ ಎಂ.ಮಹಾದೇವಪ್ಪ, ಹಿಂದಿನ ಸದಸ್ಯರು, ಮರಟಿಕ್ಯಾತನಹಳ್ಳಿ ಗ್ರಾಮ ಪಂಚಾಯಿತಿ, ಮೈಸೂರು ತಾಲ್ಲೂಕು, ಮೈಸೂರು ಜಿಲ್ಲೆ.
7) ಗಣಕ ಕೋಶ–ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್–1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.